ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/26/2020-21** **ದಿನಾಂಕ: 06/11/2021.**

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ. 10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 06/11/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀ ಮಂಜುನಾಥ್, ಕಿರಿಯ ಆರೋಗ್ಯ ಪರಿವೀಕ್ಷಕರು
3. ಶ್ರೀ. ಪ್ರವೀಣ್, ಹಿರಿಯ ಆರೋಗ್ಯ ಪರಿವೀಕ್ಷಕರು
4. ಸಹಾಯಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ, ಬಿಬಿಎಂಪಿ.
5. ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
6. ಬಾಬುರೆಡ್ಡಿ, ಸಹಾಯಕ ಅಭಿಯಂತರರು ಬಿ.ಬಿ.ಎಂ.ಪಿ. ವಿದ್ಯುತ್ ವಿಭಾಗ.
7. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
8. ಶ್ರೀ ಮಾಲಾದ್ರಿ, ಸದಸ್ಯರು
9. ಶ್ರೀಮತಿ. ಬೇಬಿರಾಣಿ, ಸದಸ್ಯರು
10. ಶ್ರೀ ಎಂ. ಶ್ರೀನಿವಾಸ್, ಸದಸ್ಯರು
11. ಶ್ರೀ ಪ್ರಕಾಶ್, ಸದಸ್ಯರು.

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿ ಹಿಂದಿನ ಸಭೆಯ ನಡವಳಿಯನ್ನು ಸಭೆಯಲ್ಲಿ ಓದಿ, ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ಹಿಂದಿನ ಸಭೆಯಲ್ಲಿ ಸಾರ್ವಜನಿಕರು ತಿಳಿಸಿದ ಸಮಸ್ಯೆಗಳನ್ನು ಪರಿಹರಿಸಿರುವ ಬಗ್ಗೆ:**

**ಬಿ.ಡಬ್ಲ್ಯೂ.ಎಸ್.ಎಸ್.ಬಿ:**

- ಕಾತೇರಮ್ಮ ಬಡಾವಣೆಯಲ್ಲಿರುವ ಬೋರ್‌ವೆಲ್ ದುರಸ್ಥಿಯಲ್ಲಿದ್ದು, ಕೇಸಿಂಗ್ ಪೈಪ್‌ನ್ನು ಬದಲಾಯಿಸಲು ಸಾರ್ವಜನಿಕರು ಕೋರಿರುತ್ತಾರೆ.
  **ಕ್ರಮ:** ಕೇಸಿಂಗ್ ಪೈಪ್‌ನ್ನು ಬದಲಾಯಿಸಲಾಗಿರುತ್ತದೆ ಎಂದು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ತಿಳಿಸಿರುತ್ತಾರೆ.

- ದೊನ್ನೆಬಿರಿಯಾನಿ ಹೋಟೆಲ್‌ನವರು ತ್ಯಾಜ್ಯವನ್ನು ಚರಂಡಿಯಲ್ಲಿ ಹಾಕುತ್ತಿರುವುದರಿಂದ ಮ್ಯಾನ್‌ಹೋಲ್ ಬ್ಲಾಕ್ ಆಗುತ್ತಿದ್ದು, ಸದರಿ ಹೋಟೆಲ್‌ನವರಿಗೆ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡುವಂತೆ ಸೂಚಿಸಲು ಸಾರ್ವಜನಿಕರು ಮತ್ತು ಸದಸ್ಯರು ಕೋರಿರುತ್ತಾರೆ.

ಕ್ರಮ: ವಾರ್ಡ್ ಸಂಖ್ಯೆ: 10 ರ ಹಿರಿಯ ಆರೋಗ್ಯ ಪರಿವೀಕ್ಷಕರು ಹೋಟೆಲ್ ತ್ಯಾಜ್ಯವನ್ನು ಚರಂಡಿಯಲ್ಲಿ ಹಾಕದಂತೆ ಕ್ರಮಕೈಗೊಳ್ಳಲಾಗಿರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು.

**ವಿದ್ಯುತ್ ವಿಭಾಗ:**

ರಾಮಚಂದ್ರಪುರ ಮುಖ್ಯರಸ್ತೆಯಲ್ಲಿ ಗಂಗಮ್ಮ ಸರ್ಕಲ್ ಬಳಿ ಐದು ಬೀದಿ ದೀಪಗಳು ಮತ್ತು ಗುಂಡುತೋಪು ಹಿಂಭಾಗ ಎರಡು ಬೀದಿ ದೀಪಗಳು ಬಹಳ ದಿನದಿಂದ ದುರಸ್ಥಿಯಲ್ಲಿರುವುದರಿಂದ ಕೂಡಲೇ ಬದಲಾಯಿಸಲು ಕೋರಿರುತ್ತಾರೆ.

ಕ್ರಮ: ಬೀದಿ ದೀಪಗಳ ದುರಸ್ಥಿ ಮಾಡಲಾಗಿರುತ್ತದೆ.

**ದಿನಾಂಕ: 06–11–2021 ರ ಸಭೆಯ ನಡಾವಳಿಗಳು:**

**ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:–**

- ಸಾರ್ವಜನಿಕರಿಗೆ ಅನುಕೂಲವಾಗಲೆಂದು ವ್ಯಾಕ್ಸಿನೇಷನ್ ನೀಡಲು ಮೊಬೈಲ್ ಟೀಮ್ ರಚನೆ ಮಾಡಲಾಗಿದ್ದು, ಸದರಿ ಮೊಬೈಲ್ ಟೀಮ್ ಸಾರ್ವಜನಿಕ ಸ್ಥಳಗಳಾದ ಬಸ್‌ನಿಲ್ದಾಣದ ಹತ್ತಿರ ಮತ್ತು ಬಡಾವಣೆಗಳಲ್ಲಿ ನಿಗಧಿತ ದಿನದಂದು ಕಾರ್ಯನಿರ್ವಹಿಸುತ್ತದೆ, ಸದರಿ ವೇಳಾಪಟ್ಟಿಯನ್ನು ಪ್ರತಿದಿನ ಕೋವಿಡ್–19 ಟೀಮ್ ವಾಟ್ಸ್‌ಆಪ್ ಗ್ರೂಪ್‌ನಲ್ಲಿ ಪ್ರಕಟಿಸಲಾಗುತಿದ್ದು, ಸಾರ್ವಜನಿಕರು ಇದರ ಉಪಯೋಗ ಪಡೆದುಕೊಳ್ಳಲು ಸೂಚಿಸಿದರು.

- ಪ್ರಸ್ತುತ ಪಾಲಿಕೆಯ ಆರೋಗ್ಯ ಸಿಬ್ಬಂಧಿಗಳು ಮನೆಮನೆಗೆ ಬೇಟಿ ನೀಡಿ ವ್ಯಾಕ್ಸಿನೇಷನ್ ಹಾಕಿಸಿಕೊಳ್ಳಲು ತಿಳುವಳಿಕೆ ನೀಡುತ್ತಿದ್ದರು, ಸಾರ್ವಜನಿಕರು ಸ್ಪಂದಿಸದಿರುವ ಬಗ್ಗೆ ಸಭೆಗೆ ತಿಳಿಸಿ, ಸಾರ್ವಜನಿಕರು ವ್ಯಾಕ್ಸಿನೇಷನ್ ಹಾಕಿಸಿಕೊಳ್ಳಲು ಅಗತ್ಯ ತಿಳುವಳಿಕೆ ನೀಡಲು ಸಭೆಯಲ್ಲಿ ನೆರೆದಿದ್ದ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ವೈದ್ಯಾಧಿಕಾರಿಗಳು ತಿಳಿಸಿದರು.

- ಪ್ರಸ್ತುತ ಕೋವಿಡ್–19 ರ 3ನೇ ಅಲೆಯಲ್ಲಿ ಹಿಂದಿನಂತೆ ರೋಗಲಕ್ಷಣಗಳು ಕಂಡುಬರುವುದಿಲ್ಲ, ನೇರವಾಗಿ ಶ್ವಾಸಕೋಶಕ್ಕೆ ಹಾನಿ ಮಾಡುವುದರಿಂದ ಸಾರ್ವಜನಿಕರು ಬಹಳ ಎಚ್ಚರದಿಂದ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಗಳನ್ನು ಪಾಲಿಸುತ್ತ, ಮೊದಲಿನಂತೆಯೇ ಮಾಸ್ಕ್ ಹಾಗೂ ಸ್ಯಾನಿಟೈಜರ್ ಉಪಯೋಗಿಸುತ್ತಿರುವಂತೆ ಸಾರ್ವಜನಿಕರಿಗೆ ಸೂಚಿಸಿದರು.

ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

6/11/21

ನೋಡೆಲ್ ಅಧಿಕಾರಿ ವಾರ್ಡ್–10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.

2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮುಖ್ಯ ಅಭಿಯಂತರರು, ಕೆರೆಗಳು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಬೃಹತ್ ನೀರುಗಾಲುವೆ, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, TEC ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
10. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
11. ಕಛೇರಿ ಕಡತಕ್ಕೆ.